ಪದವಿಪೂರ್ವ ಕಾಲೇಜು ಕಟ್ಟಡಕ್ಕೆ ಅನುದಾನ

207 (303), ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ)

ಅ) ರಾಮನಗರ ತಾಲ್ಲೂಕು, ಕೋಟಗಲ್ ಹೋಬಳಿ, ಜಾಲಮಂಗಲ ಸರ್ಕಾರಿ ಪದವಿ ಪೂರ್ವ ಕಾಲೇಜು ಕಟ್ಟಡದ ಕಾಮಗಾರಿಗಳು ಬಾಕಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಬಾಕಿ ಇರುವ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು; ಗುತ್ತಿಗೆದಾರರಿಗೆ ಪಾವತಿಸಲು ಬಾಕಿ ಇರುವ ಹಣವೆಷ್ಟು;

ಇ) ಗುತ್ತಿಗೆದಾರರಿಗೆ ಬಾಕಿಯನ್ನು ಪಾವತಿ ಮಾಡಿ ವಿದ್ಯಾರ್ಥಿಗಳ ಉಪಯೋಗಕ್ಕೆ ಕಟ್ಟಡವನ್ನು ಯಾವ ಕಾಲಮಿತಿಯೊಳಗಾಗಿ ಬಿಟ್ಟು ಕೊಡಲಾಗುವುದು;

ಈ) ಗುತ್ತಿಗೆದಾರರಿಗೆ ಬಾಕಿಯನ್ನು ಪಾವತಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಸರ್ಕಾರಿ ಪದವಿ ಪೂರ್ವ ಕಾಲೇಜು, ಜಾಲಮಂಗಲ ಈ ಕಾಲೇಜಿನ ಕಟ್ಟಡದ ನಿರ್ಮಾಣ ಕಾರ್ಯವು ಮುಕ್ತಾಯದ ಹಂತ ತಲುಪಿರುತ್ತದೆ. ಆದರೆ ಸದರಿ ಕಾಮಗಾರಿಯಲ್ಲಿ ಗುತ್ತಿಗೆಯು ಒಮ್ಮೆ ರದ್ದುಗೊಂಡು ನಂತರ ಮರು ಗುತ್ತಿಗೆಯನ್ನು ಆಹ್ವಾನಿಸಿ ನಿರ್ವಹಿಸಲಾಗಿದೆ. ಈ ಕಾಮಗಾರಿಗೆ 104.14 ಲಕ್ಷ ರೂಪಾಯಿಗಳ ಮೊತ್ತವನ್ನು ಪಾವತಿಸಿದ್ದು, ಹಾಲಿ ಸದರಿ ಕಾಮಗಾರಿಗೆ ಯಾವುದೇ ಹಣದ ಬಾಕಿಯಿರುವುದಿಲ್ಲ. ಆದರೆ ಹೆಚ್ಚುವರಿ ಪರಿಮಾಣ ಮತ್ತು ಹೆಚ್ಚುವರಿ ಅಂಶಗಳಿಗೆ ಅನುಮೋದನೆಯನ್ನು ಕೋರಿರುತ್ತಾರೆ. ಈ ಸಂಬಂಧ

ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಪರಿಶೀಲನೆಯಲ್ಲಿದೆ.

ಇ) ಆದಷ್ಟು ಶೀಘ್ರದಲ್ಲಿ ಕಾಮಗಾರಿ ಪೂರ್ಣಗೊಳಿಸುವ ಕುರಿತು ಪರಿಶೀಲಿಸುತ್ತಿದೆ.

ಈ) ಲೋಕೋಪಯೋಗಿ ಇಲಾಖೆಯಿಂದ ಬಾಕಿ ಬಿಲ್ಲನ್ನು ನಿರೀಕ್ಷಿಸಲಾಗಿದೆ.

13ನೇ ಹಣಕಾಸು ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ

208 (304), ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಕನಕಪುರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಗ್ರಾಮ ಪಂಚಾಯತಿಗಳಿವೆ; ಅವು ಯಾವುವು;

ಆ) ಕಳೆದ 3 ವರ್ಷಗಳಲ್ಲಿ 13ನೇ ಹಣಕಾಸು ಯೋಜನೆಯಡಿಯಲ್ಲಿ ಯಾವ ಯಾವ ಗ್ರಾಮ ಪಂಚಾಯತಿಗಳಿಗೆ ಎಷ್ಟೆಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ;

ಇ) ಹಾಗಿದ್ದಲ್ಲಿ, ಯಾವ್ಯಾವ ಪಂಚಾಯತಿಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಎಷ್ಟು ಹಣ ಖರ್ಚಾಗಿದೆ ಮತ್ತು ಎಷ್ಟು ಹಣ ಉಳಿಕೆಯಾಗಿದೆ.

ಶ್ರೀ ಹೆಚ್.ಕೆ.ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಕನಕಪುರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 31 ಗ್ರಾಮ ಪಂಚಾಯತಿಗಳಿವೆ; (ಅನುಬಂಧ–1)ರಲ್ಲಿ ಲಗತ್ತಿಸಿದೆ.

ಆ) ಅನುಬಂಧ–2ರಲ್ಲಿ ಲಗತ್ತಿಸಿದೆ.

ಇ) ಅನುಬಂಧ–3ರಲ್ಲಿ ಲಗತ್ತಿಸಿದೆ.